ಕರ್ನಾಟಕ ಸರ್ಕಾರ

**ಫೆಬ್ರವರಿ 8, 2018**

# ಮಹದಾಯಿ ನ್ಯಾಯಾಧಿಕರಣ ಅವಧಿ ವಿಸ್ತರಣೆಗೆ ಗೋವಾ ಪ್ರಸ್ತಾವ, ರಾಜ್ಯ ತಿರಸ್ಕಾರ : ಸಿದ್ದರಾಮಯ್ಯ



**ಬೆಂಗಳೂರು, ಫೆಬ್ರವರಿ 8 :**

ಮಹದಾಯಿ ನದಿ ನೀರು ಹಂಚಿಕೆ ಕುರಿತಂತೆ ಉದ್ಭವಿಸಿರುವ ವಿವಾದವನ್ನು ಬಗೆಹರಿಸಲು ರಚಿಸಲಾಗಿರುವ ನ್ಯಾಯಾಧಿಕರಣದ ಅವಧಿಯನ್ನು ಮತ್ತೆ ವಿಸ್ತರಿಸಬೇಕೆಂಬ ಗೋವಾ ರಾಜ್ಯದ ಪ್ರಸ್ತಾವವನ್ನು ಕರ್ನಾಟಕ ರಾಜ್ಯ ಸಾರಾಸಗಟಾಗಿ ತಿರಸ್ಕರಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಪ್ರಕಟಿಸಿದರು.

ರಾಜ್ಯ ವಿಧಾನ ಮಂಡಲದ ಸದನ ನಾಯಕರ ಸಭೆಯ ನಂತರ ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದ ಅವರು ಗೋವಾ ರಾಜ್ಯವು ಸಲ್ಲಿಸಿದ ತಕರಾರು ಅರ್ಜಿಯ ಮೇರೆಗೆ ರಚಿಸಲಾಗಿದ್ದ ಮಹದಾಯಿ ನ್ಯಾಯಾಧಿಕರಣದಲ್ಲಿ ಫೆಬ್ರವರಿ 6 ರಂದು ವಿಚಾರ ಪ್ರಾರಂಭವಾಗಬೇಕಿತ್ತು. ಆದರೆ, ಅಂದು ನ್ಯಾಯಾಧಿಕರಣದ ಮುಂದೆ ಹಾಜರಾದ ಗೋವಾದ ಪರ ವಕೀಲರು ನ್ಯಾಯಾಧಿಕರಣದ ಅವಧಿಯ ವಿಸ್ತರಣೆ ಕುರಿತು ಪ್ರಸ್ತಾಪಿಸಿದರು. ಗೋವಾದ ಪ್ರಸ್ತಾಪ ಕುರಿತು ಅಭಿಪ್ರಾಯ ನೀಡುವಂತೆ ನ್ಯಾಯಾಧಿಕರಣವು ಸೂಚಿಸಿದಾಗ, ಸರ್ಕಾರದ ಗಮನಕ್ಕೆ ತಂದ ನಂತರವೇ ಈ ನಿಟ್ಟಿನಲ್ಲಿ ಅಭಿಪ್ರಾಯ ನೀಡುವುದಾಗಿ ತಿಳಿಸಿ, ಈ ಬಗ್ಗೆ ತಮಗೆ ಮಾಹಿತಿ ನೀಡಿದರು.

ಮಹದಾಯಿ ನ್ಯಾಯಾಧಿಕರಣವನ್ನು ಅಂತಾರಾಜ್ಯ ಜಲ ವಿವಾದ ಕಾಯಿದೆ–1956 ಅಡಿಯಲ್ಲಿ 2010 ರ ನವೆಂಬರ್ 16 ರಂದು ರಚಿಸಲಾಗಿದ್ದರೂ, ವಾಸ್ತವವಾಗಿ ಈ ನ್ಯಾಯಾಧಿಕರಣವು

ಅಸ್ತಿತ್ವಕ್ಕೆ ಬಂದದ್ದು 2013 ರ ನವೆಂಬರ್ 16 ರಂದು. ಅಂತಾರಾಜ್ಯ ಜಲ ವಿವಾದ ಕಾಯಿದೆಯ ಪ್ರಕಾರ ನ್ಯಾಯಾಧಿಕರಣವು ಅಸ್ತಿತ್ವಕ್ಕೆ ಬಂದ ಮೂರು ವರ್ಷದೊಳಗೆ ವಿಚಾರಣೆ ನಡೆಸಿ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಿ ಪ್ರಕರಣವನ್ನು ಇತ್ಯರ್ಥಪಡಿಸಬೇಕು. ಆದರೆ, ಯಾವುದೇ ಕಾರಣಕ್ಕೇ ಆಗಲೀ ನಿಗದಿತ ಅವಧಿಯೊಳಗೆ ವಿಚಾರಣೆ ಪೂರ್ಣಗೊಳ್ಳದಿದ್ದರೆ ನ್ಯಾಯಾಧಿಕರಣದ ಅವಧಿಯನ್ನು ಮತ್ತೆ ಎರಡು ವರ್ಷಗಳ ಕಾಲ ವಿಸ್ತರಿಸಲು ಕಾನೂನಿನಲ್ಲಿ ಅವಕಾಶವಿದೆ. ಈಗಾಗಲೇ ಅವಧಿ ವಿಸ್ತರಣೆಯಾಗಿರುವ ಹಿನ್ನೆಲೆಯಲ್ಲಿ ಮಹದಾಯಿ ನ್ಯಾಯಾಧಿಕರಣದ ಅವಧಿ 2018 ರ ಆಗಸ್ಟ್ 20 ರಂದು ಪೂರ್ಣಗೊಳ್ಳಲಿದೆ. ಆ ದಿನಾಂಕದೊಳಗೆ ನ್ಯಾಯಾಧಿಕರಣವು ತನ್ನ ವರದಿ ಕೊಡಲೇ ಬೇಕಿದೆ ಎಂದು ಸಿದ್ದರಾಮಯ್ಯ ಅವರು ತಿಳಿಸಿದರು.

ಮೊದಲನೆಯದಾಗಿ ನ್ಯಾಯಾಧಿಕರಣದ ಅವಧಿಯನ್ನು ಮತ್ತೆ ವಿಸ್ತರಣೆ ಮಾಡಲು ಕಾನೂನಿನಲ್ಲಿ ಅವಕಾಶವಿಲ್ಲ. ಒಂದು ವೇಳೆ ಅವಧಿ ವಿಸ್ತರಣೆ ಮಾಡಲೇಬೇಕಾದ ಪ್ರಸಂಗ ಉದ್ಭವಿಸಿದರೂ ಅಂತಾರಾಜ್ಯ ಜಲ ವಿವಾದ ಕಾಯಿದೆಗೆ ತಿದ್ದುಪಡಿ ತರಬೇಕಾಗುತ್ತದೆ. ಅವಧಿ ವಿಸ್ತರಣೆ ಮಾಡಿದರೆ ಸಮಸ್ಯೆ ಬಗೆಹರಿಯುವುದು ಮತ್ತಷ್ಟು ವಿಳಂಬವಾಗುತ್ತದೆ. ಈ ವಿವಾದವು ಕುಡಿಯುವ ನೀರಿಗೆ ಸಂಬಂಧಿಸಿರುವ ಹಿನ್ನೆಲೆಯಲ್ಲಿ ಪ್ರಕರಣದ ವಿಚಾರಣೆ ಆಧ್ಯತೆಯ ಮೇರೆಗೆ ನಡೆಯಬೇಕೆಂಬುದು ರಾಜ್ಯದ ಸ್ಪಷ್ಟ ನಿಲುವಾಗಿದೆ. ಸರ್ಕಾರದ ಈ ನಿಲುವನ್ನು ಗೋವಾದ ಪರ ವಕೀಲರಿಗೆ ಹಾಗೂ ಮಹದಾಯಿ ನ್ಯಾಯಾಧಿಕರಣಕ್ಕೆ ನಮ್ಮ ರಾಜ್ಯದ ಪರ ವಕೀಲರು ಖಡಾಖಂಡಿತವಾಗಿ ತಿಳಿಸಿದ್ದಾರೆ. ಆದಕಾರಣ, ನ್ಯಾಯಾಧಿಕರಣದಲ್ಲಿ ಪ್ರಕರಣದ ವಿಚಾರಣೆ ಇಂದಿನಿಂದ ಪ್ರಾರಂಭವಾಗಿದೆ ಎಂದು ಮುಖ್ಯಮಂತ್ರಿ ವಿವರಿಸಿದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಧಿಕರಣಕ್ಕೆ ರಾಜ್ಯ ಸರ್ಕಾರವು ಎಲ್ಲಾ ಅಗತ್ಯ ಸಾಕ್ಷಿ–ಪುರಾವೆಗಳನ್ನು ಈಗಾಗಲೇ ಒದಗಿಸಿದೆ. ಅಂತೆಯೇ, ಸೂಕ್ತ ಲಿಖಿತ ಹೇಳಿಕೆಗಳನ್ನೂ ಸಲ್ಲಿಸಿದೆ. ಇದೀಗ ನ್ಯಾಯಾಧಿಕರಣದ ಸಮ್ಮುಖದಲ್ಲಿ ವಾದ–ಪ್ರತಿವಾದದ ಮಂಡನೆ ಮಾತ್ರ ಬಾಕಿ ಉಳಿದಿದೆ. ಗೋವಾ ರಾಜ್ಯವು ಅರ್ಜಿದಾರ ರಾಜ್ಯವಾಗಿರುವ ಹಿನ್ನೆಲೆಯಲ್ಲಿ, ನ್ಯಾಯಾಧಿಕರಣದಲ್ಲಿ ಮೊದಲು ಗೋವಾ ರಾಜ್ಯವೇ ತನ್ನ ವಾದವನ್ನು ಮಂಡಿಸಬೇಕಿದೆ. ನಂತರ, ಪ್ರತಿವಾದಿಯಾಗಿರುವ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳು ತಮ್ಮ ಪ್ರತಿ ವಾದವನ್ನು ಮಂಡಿಸಲು ಅವಕಾಶವಿದೆ ಎಂಬ ಅಂಶವನ್ನು ಸಿದ್ದರಾಮಯ್ಯ ಅವರು ಸ್ಪಷ್ಟಪಡಿಸಿದರು.

ಕರ್ನಾಟಕ ಪರ ವಕೀಲರಾಗಿದ್ದ ಫಾಲಿ ಎಸ್ ನಾರಿಮನ್ ಅವರು ಅನಾರೋಗ್ಯದ ಹಿನ್ನೆಲೆಯಲ್ಲಿ ಭಾರತದ ಮಾಜಿ ಅಟಾರ್ನಿ ಜನರಲ್ ಆಗಿ ಸೇವೆ ಸಲ್ಲಿಸಿರುವ ಭಾರತದ ಸರ್ವೋಚ್ಚ ನ್ಯಾಯಾಲಯದ ಹಿರಿಯ ವಕೀಲರಾದ ಅಶೋಕ್ ಹೆಚ್ ದೇಸಾಯ್ ಅವರು ವಿಚಾರಣಾ ಸಂದರ್ಭದಲ್ಲಿ ಮಹದಾಯಿ ನ್ಯಾಯಾಧಿಕರಣದಲ್ಲಿ

ರಾಜ್ಯವನ್ನು ಪ್ರತಿನಿಧಿಸಲಿದ್ದಾರೆ. ಇವರ ಜೊತೆಗೆ ಹಿರಿಯ ವಕೀಲ ಶ್ಯಾಮ್ ದಿವಾನ್ ಅವರೂ ರಾಜ್ಯದ ಹಿತವನ್ನು ಕಾಯ್ದುಕೊಳ್ಳಲಿದ್ದಾರೆ ಎಂದು ಮುಖ್ಯಮಂತ್ರಿ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದರು.

ಕಾವೇರಿ, ಕೃಷ್ಣಾ ಹಾಗೂ ಮಹದಾಯಿ ಒಳಗೊಂಡಂತೆ ಎಲ್ಲಾ ಜಲ ವಿವಾದಗಳ ಸಂದರ್ಭದಲ್ಲೂ ಪ್ರತಿಪಕ್ಷಗಳ ಸಲಹೆ–ಸೂಚನೆಗಳನ್ನು ಪಡೆದೇ ಸರ್ಕಾರದ ನಿಲುವನ್ನು ರೂಪಿಸುವ ಪರಿಪಾಠ ರಾಜ್ಯದಲ್ಲಿ ಬೆಳೆದು ಬಂದಿದೆ. ಮಹದಾಯಿ ನ್ಯಾಯಾಧಿಕರಣದಲ್ಲಿನ ಇತ್ತೀಚಿನ ವಿದ್ಯಮಾನಗಳನ್ನು ಪ್ರತಿಪಕ್ಷಗಳ ಮುಖಂಡರ ಗಮನಕ್ಕೆ ತರುವುದೇ ಇಂದಿನ ಸಭೆಯ ಉದ್ದೇಶವಾಗಿತ್ತು. ರಾಜ್ಯ ವಿಧಾನ ಪರಿಷತ್ತಿನ ಪ್ರತಿಪಕ್ಷದ ನಾಯಕ ಕೆ. ಎಸ್. ಈಶ್ವರಪ್ಪ, ರಾಜ್ಯ ವಿಧಾನ ಸಭೆಯ ಪ್ರತಿಪಕ್ಷದ ನಾಯಕ ಜಗದೀಶ್ ಶೆಟ್ಟರ್ ಅವರು ಈ ಸಭೆಯಲ್ಲಿ ಪಾಲ್ಗೊಂಡಿದ್ದರು. ಅನಾರೋಗ್ಯದ ಹಿನ್ನೆಲೆಯಲ್ಲಿ ರಾಜ್ಯ ವಿಧಾನ ಪರಿಷತ್ತಿನ ಜಾತ್ಯಾತೀತ ಜನತಾ ದಳದ ಸದನ ನಾಯಕ ಬಸವರಾಜ ಹೊರಟ್ಟಿ ಅವರು ಸಭೆಗೆ ಹಾಜರಾಗಲು ಸಾಧ್ಯವಾಗಲಿಲ್ಲ. ರಾಜ್ಯ ವಿಧಾನ ಸಭೆಯಲ್ಲಿನ ಜಾತ್ಯಾತೀತ ಜನತಾ ದಳದ ಸದನ ನಾಯಕ ಹೆಚ್. ಡಿ. ಕುಮಾರ ಸ್ವಾಮಿ ಅವರ ಪರವಾಗಿ ಶಾಸಕ ಎನ್. ಹೆಚ್. ಕೋನರೆಡ್ಡಿ ಅವರು ಸಭೆಗೆ ಹಾಜರಾಗಿದ್ದರು. ಎಲ್ಲರೂ ಸರ್ಕಾರ ನಿಲುವನ್ನು ಸಮರ್ಥಿಸಿದ್ದಾರೆ ಎಂದು ಸಿದ್ದರಾಮಯ್ಯ ಅವರು ಹೇಳಿದರು.

ಜಲ ಸಂಪನ್ಮೂಲ ಸಚಿವ ಎಂ. ಬಿ. ಪಾಟೀಲ್, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಕೆ. ರತ್ನಪ್ರಭಾ, ಜಲ ಸಂಪನ್ಮೂಲ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಾಕೇಶ್ ಸಿಂಗ್, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಎಲ್. ಕೆ. ಅತೀಕ್ ಅವರೂ ಸಭೆಯಲ್ಲಿ ಪಾಲ್ಗೊಂಡು ಮುಖ್ಯಮಂತ್ರಿಯವರಿಗೆ ಸಕಾಲಿಕ ನೆರವು ನೀಡಿದರು.

**************

ಡಿ ಪಿ ಎಂ